# ಎನ್‌ಇಪಿ: ಇದೇ 23ರಿಂದ ಪ್ರವೇಶ ಪ್ರಕ್ರಿಯೆ ಆರಂಭ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ನೂತನ ರಾಷ್ಟ್ರೀಯ ಶಿಕ್ಷಣ ನೀತಿಯಡಿ (ಎನ್‌ಇಪಿ) ಕಲಿಕೆಗೆ ಇದೇ 23ರಿಂದಲೇ ಪ್ರವೇಶ ಪ್ರಕ್ರಿಯೆ ಪ್ರಾರಂಭಿಸಲಾಗುವುದು. ಪ್ರವೇಶ ಪ್ರಕ್ರಿಯೆಗೆ ಕೇಂದ್ರದ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹಾಗೂ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಚಾಲನೆ ನೀಡುವರು' ಎಂದು ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್. ಅಶ್ವತ್ಥನಾರಾಯಣ ಹೇಳಿದರು.

ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಹಾಗೂ ಕ್ರಿಸ್ತು ಜಯಂತಿ ಕಾಲೇಜು ಸಹಯೋಗದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ-2020 ಅನುಷ್ಠಾನ ಕುರಿತು ಬುಧವಾರ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು.

'ನೂತನ ನೀತಿಯ ಜಾರಿಯ ಹಿಂದೆ ವಿದ್ಯಾರ್ಥಿಯ ಹಿತ ಮಾತ್ರ ಅಡಗಿದೆ. ಯಾವುದೇ ರಹಸ್ಯ ಕಾರ್ಯಸೂಚಿ ಇಲ್ಲ' ಎಂದು ಅವರು ಹೇಳಿದರು.

'ಶಿಕ್ಷಣ ಸಂಸ್ಥೆಗಳನ್ನು ಅತ್ಯುತ್ತಮವಾಗಿ ರೂಪಿಸಬೇಕು. ವಿದ್ಯಾರ್ಥಿ ಕೇಂದ್ರಿತ ವ್ಯವಸ್ಥೆ ಅಲ್ಲಿರಬೇಕು. ಮುಂದಿನ ಅನೇಕ ವರ್ಷಗಳ ಮುನ್ನೋಟ ಇಟ್ಟುಕೊಂಡು ಸಂಸ್ಥೆಗಳನ್ನು ಕಟ್ಟಿ ಬೆಳೆಸಬೇಕು. ಇಂಥ ಸಂಸ್ಥೆಗಳನ್ನು ಆಮೂಲಾಗ್ರವಾಗಿ ಬೆಳೆಸಲು ನೆರವಾಗಬೇಕು. ಯಾವುದೇ ಶಿಕ್ಷಣ ಸಂಸ್ಥೆಯೂ ಲಾಭ ಗಳಿಕೆಗಾಗಿ ಕೆಲಸ ಮಾಡಿಲ್ಲ, ಮಾಡುವುದೂ ಇಲ್ಲ' ಎಂದೂ ಡಾ.ಅಶ್ವತ್ಥನಾರಾಯಣ ಸ್ಪಷ್ಟಪಡಿಸಿದರು.

ಕಾಲೇಜು ಶಿಕ್ಷಣ ಇಲಾಖೆ ಆಯುಕ್ತ ಪಿ. ಪ್ರದೀಪ್, 'ವಿದ್ಯಾರ್ಥಿಗಳ ಕೌಶಲ ಮತ್ತು ಸಾಮರ್ಥ್ಯವನ್ನು ವೃದ್ಧಿಸುವುದಕ್ಕೆ ಮಾತ್ರವಲ್ಲದೆ, ಆರೋಗ್ಯ ವಿಷಯದ ಕಡೆಗೂ ಆದ್ಯತೆ ನೀಡಲಾಗಿದೆ. ಕೌಶಲ ಆಧಾರಿತ ಪಠ್ಯಕ್ರಮ, ವೈಜ್ಞಾನಿಕ ಶಿಕ್ಷಣ ಶಾಸ್ತ್ರ, ಗುಣಮಟ್ಟದ ಮೌಲ್ಯಮಾಪನದಂತಹ ಅಂಶಗಳು ವಿದ್ಯಾರ್ಥಿಗಳನ್ನು ಜಾಗತಿಕ ಸ್ಪರ್ಧಾತ್ಮಕತೆಗೆ ಸಜ್ಜುಗೊಳಿಸಲಿವೆ' ಎಂದರು.

ಕ್ರಿಸ್ತು ಜಯಂತಿ ಕಾಲೇಜಿನ ಪ್ರಾಚಾರ್ಯ ಡಾ.ಅಗಸ್ಟಿನ್ ಜಾರ್ಜ್, ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತ ಪಿ.ಪ್ರದೀಪ್, ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಡಿ.ಕುಮುದಾ, ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷ ಪ್ರೊ.ತಿಮ್ಮೇಗೌಡ ಮಾತನಾಡಿದರು.